ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ನಗರ ಯೋಜನಾ ಪ್ರಾಧಿಕಾರಗಳ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-

912 (1027) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನ ಜಿಲ್ಲೆಯಲ್ಲಿರುವ ನಗರ ಯೋಜನಾ ಪ್ರಾಧಿಕಾರಗಳು ಯಾವುವು; ಅವುಗಳ ಕಾರ್ಯವ್ಯಾಪ್ತಿಯೇನು; (ಸಂಪೂರ್ಣ ವಿವರ ನೀಡುವುದು)

(ಆ) ಈ ನಗರ ಯೋಜನೆ ಪ್ರಾಧಿಕಾರಗಳಿಂದ ಯಾವ ಯಾವ ಪ್ರದೇಶಗಳಲ್ಲಿ ವಸತಿ ಬಡಾವಣೆಗಳನ್ನು ನಿರ್ಮಾಣ ಮಾಡಲಾಗಿದೆ; ಈ ಬಡಾವಣೆಗಳಲ್ಲಿ ಎಷ್ಟು ನಿವೇಶನಗಳನ್ನು ನಿರ್ಮಾಣ ಮಾಡಲಾಗಿದೆ; ಇವುಗಳ ವಿಸ್ತೀರ್ಣವೆಷ್ಟು; ಈ ಬಡಾವಣೆಗಳನ್ನು ಯಾವಾಗ ನಿರ್ಮಾಣ ಮಾಡಲಾಗಿದೆ; (ಬಡಾವಣೆವಾರು ವಿವರ ನೀಡುವುದು)

(ಇ) ಈ ಪ್ರಾಧಿಕಾರಗಳು ಬಡಾವಣೆಗಳ ಅಭಿವೃದ್ಧಿಗಾಗಿ ಇಲ್ಲಿಯವರೆಗೆ ಕೈಗೊಂಡಿರುವ ಕಾಮಗಾರಿಗಳು ಯಾವುವು ಈ ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗಿದೆ; ಈ ಕಾಮಗಾರಿಗಳ ವೆಚ್ಚವೆಷ್ಟು; ಈ ಕಾಮಗಾರಿಗಳಿಗಾಗಿ ಇಲ್ಲಿಯವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಈ ಕಾಮಗಾರಿಗಳನ್ನು ನಿರ್ವಹಿಸಿರುವ ಗುತ್ತಿಗೆದಾರರ ವಿವರಗಳೇನು? (ಬಡಾವಣೆವಾರು ಮಾಹಿತಿ ನೀಡುವುದು)